POLICE NEWS REGISTERED KA/BGW-1618/2024-26 REGD. WITH RNI NO. 36669/82 PAGES : 16 | POSTED AT BANGALORE PSO BG 560026 Every Tuesday | Publishing Date : 15.2.2026



# ಡಿವೋರ್ಸ್ ವದಂತಿಗೆ ಮಯೂರಿ ಸ್ಪಷ್ಟನೆ

ಕನ್ನಡ ಕಿರುತೆರೆಯಲ್ಲಿ ಅಶ್ವಿನಿ ನಕ್ಷತ್ರ ಧಾರಾವಾಹಿಯ ಮೂಲಕ ಜನಪ್ರಿಯತೆ ಪಡೆದ ನಟಿ ಮಯೂರಿ ಕ್ಯಾತರಿ ಬಗ್ಗೆ ಇತ್ತೀಚೆಗೆ ಡಿವೋರ್ಸ್ ಸಂಬಂಧಿಸಿದ ವದಂತಿಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿತ್ತು. ಅವರ ದಾಂಪತ್ಯ ಜೀವನದಲ್ಲಿ ಬಿರುಕು ಮೂಡಿದೆ ಎಂಬ ಸುದ್ದಿ ವ್ಯಾಪಕ ಚರ್ಚೆಗೆ ಕಾರಣವಾಗಿತ್ತು.

2020ರಲ್ಲಿ ವೈವಾಹಿಕ ಜೀವನಕ್ಕೆ ಕಾಲಿಟ್ಟ ಮಯೂರಿ, ಮಗುವಿಗೆ ಜನ್ಮ ನೀಡಿದ ಬಳಿಕ ಕುಟುಂಬದ ಕಡೆ ಹೆಚ್ಚು ಗಮನಹರಿಸಿ ಚಿತ್ರರಂಗದಿಂದ ಸ್ವಲ್ಪ ದೂರ ಉಳಿದಿದ್ದರು. ಈ ಕಾರಣದಿಂದಲೇ ಅವರ ವೈಯಕ್ತಿಕ ಜೀವನದ ಬಗ್ಗೆ ಅನಾವಶ್ಯಕ ಊಹಾಪೋಹಗಳು ಹುಟ್ಟಿಕೊಂಡಿದ್ದವು.

ಈ ಎಲ್ಲ ಗಾಸಿಪ್‌ಗಳಿಗೆ ಪ್ರತಿಕ್ರಿಯೆ ನೀಡಿರುವ ಮಯೂರಿ, ತಮ್ಮ ವೈಯಕ್ತಿಕ ಜೀವನದ ಬಗ್ಗೆ ಸಾರ್ವಜನಿಕವಾಗಿ ಮಾತನಾಡಲು ಆಸಕ್ತಿ ಇಲ್ಲ ಎಂದು ಹೇಳಿದ್ದಾರೆ. ಜೊತೆಗೆ ತಮ್ಮ ಕುಟುಂಬ ಜೀವನ ಸುಖಕರವಾಗಿಯೇ ಸಾಗುತ್ತಿದೆ ಎಂಬ ಸಂದೇಶ ನೀಡಿದ್ದು, ಡಿವೋರ್ಸ್ ಕುರಿತ ವದಂತಿಗಳಿಗೆ ತೆರೆ ಎಳೆದಂತಾಗಿದೆ. ☯



# ಚಂದ್ರಚೂಡ್ ವಿರುದ್ಧ ಮಂಜು ವಾಗ್ದಾಳಿ!

ಬಿರಿಯಾನಿ ಹಾಕಿಸಿ ಸಿನಿಮಾವನ್ನು ಜನರಿಗೆ ತೋರಿಸುವಂತಹ ನಡೆ ತಪ್ಪು ಎಂದು ನಿರ್ಮಾಪಕ ಕೆ. ಮಂಜು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನಿರ್ಮಾಪಕರು ಕಾಂಡೋಮ್ ಸಪ್ಲೈ ಮಾಡುತ್ತಾರೆ ಎಂಬ ಆರೋಪವು ತಮ್ಮ ಆತ್ಮಗೌರವಕ್ಕೆ ಧಕ್ಕೆ ತಂದಿದೆ ಎಂದು ಹೇಳಿದ ಅವರು, ಈ ಸಂಬಂಧ ಮತ್ತೊಮ್ಮೆ ಪತ್ರಿಕಾಗೋಷ್ಠಿ ನಡೆಸಿ ಚಕ್ರವರ್ತಿ ಚಂದ್ರಚೂಡ್ ವಿರುದ್ಧ ಕಿಡಿಕಾರಿದ್ದಾರೆ. ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, 5 ಕೋಟಿ ಮಾನನಷ್ಟ ಮೊಕದ್ದಮೆ ಹೂಡಿರುವುದಾಗಿ ತಿಳಿಸಿದ ಕೆ. ಮಂಜು, ತಾವು ಯಾವಾಗಲೂ ಚಿತ್ರೋದ್ಯಮದ ಒಳಿತಿಗಾಗಿ ಮಾತ್ರ ಮಾತನಾಡಿದ್ದೇನೆ ಹೊರತು ಯಾರ ವೈಯಕ್ತಿಕ ವಿಚಾರಗಳಲ್ಲ ಎಂದು ಸ್ಪಷ್ಟಪಡಿಸಿದರು. ''ನಾನು ನನ್ನ ಮಕ್ಕಳಿಗೆ ಒಳ್ಳೆಯ ತಂದೆ, ಚಿತ್ರರಂಗದಲ್ಲಿ ನನಗೆ ಗೌರವವಿದೆ. ನಾನು ರೈತನ ಮಗ, ವಿದ್ಯಾವಂತನಲ್ಲ ಎಂಬುದನ್ನು ಹೆಮ್ಮೆಯಿಂದ ಹೇಳುತ್ತೇನೆ'' ಎಂದು ಹೇಳಿದ ಅವರು, ''ಅವನು ಬ್ಯಾಡ್ ಅಂತೆ, ನಾನು ವೆರಿ ಬ್ಯಾಡ್ ನಾನು ಆರ್ಡಿನರಿ ಅಲ್ಲ'' ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವಿವಾದದ ಬೆನ್ನಲ್ಲೇ ಚಿತ್ರರಂಗದಲ್ಲಿ ಚರ್ಚೆ ತೀವ್ರಗೊಂಡಿದ್ದು, ಹಲವರು ನಿರ್ಮಾಪಕರ ಪರವಾಗಿ ಬೆಂಬಲ ವ್ಯಕ್ತಪಡಿಸುತ್ತಿದ್ದಾರೆ. ಪರಸ್ಪರ ಗೌರವ, ಜವಾಬ್ದಾರಿಯುತ ಮಾತುಗಳು ಮತ್ತು ಶಿಸ್ತಿನ ವರ್ತನೆ ಸಿನಿಮಾ ಕ್ಷೇತ್ರದ ಬೆಳವಣಿಗೆಗೆ ಅಗತ್ಯ ಎಂಬ ಅಭಿಪ್ರಾಯಗಳು ಕೇಳಿಬರುತ್ತಿವೆ. ಮುಂದಿನ ದಿನಗಳಲ್ಲಿ ಈ ಪ್ರಕರಣ ಯಾವ ತಿರುವು ಪಡೆಯಲಿದೆ ಎಂಬುದು ಕಾನೂನು ಪ್ರಕ್ರಿಯೆಯ ಮೂಲಕ ಸ್ಪಷ್ಟವಾಗಲಿದೆ. ☯

# ಜೋ ಸೈಮನ್ ವಿಧಿವಶ



ಸಾಹಸಸಿಂಹ ವಿಷ್ಣುವರ್ಧನ್ ಅಭಿನಯದ ಸಾಹಸ ಸಿಂಹ ಹಾಗೂ ಅಂಬರೀಶ್ ನಟನೆಯ ಏಜೆಂಟ್ ಅಮರ್ ಚಿತ್ರಗಳ ಖ್ಯಾತ ನಿರ್ದೇಶಕ ಜೋ ಸೈಮನ್ ಹೃದಯಾಘಾತದಿಂದ ನಿಧನರಾಗಿದ್ದಾರೆ. ಫಿಲ್ಮ್ ಚೇಂಬರ್ ಸಭೆಯಲ್ಲಿ ಭಾಗವಹಿಸಿದ್ದ ವೇಳೆ ಅಸ್ವಸ್ಥರಾಗಿದ್ದ ಅವರನ್ನು ಬೆಂಗಳೂರಿನ ಮಲ್ಲಿಗೆ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದ್ದಾರೆ. ಮಂಡ್ಯ ಮೂಲದ ಜೋ ಸೈಮನ್ 1946ರಲ್ಲಿ ಜನಿಸಿದ್ದು, 1977ರಲ್ಲಿ ಒಂದು ಪ್ರೇಮದ ಕಥೆ ಮೂಲಕ ಸ್ವತಂತ್ರ ನಿರ್ದೇಶಕರಾಗಿ ಹೊರಹೊಮ್ಮಿ 100ಕ್ಕೂ ಹೆಚ್ಚು ಕನ್ನಡ ಸಿನಿಮಾಗಳಲ್ಲಿ ಕೆಲಸ ಮಾಡಿದ್ದರು. ಇವರ ಆತ್ಮಕ್ಕೆ 'ಪತ್ರಿಕೆ' ಶಾಂತಿ ಕೋರುತ್ತದೆ. ☯

# ಕಂಗನಾ ವಿರುದ್ಧ ಪ್ರಕಾಶ್ ರೈ ಆಕ್ರೋಶ!



ಆಸ್ಕರ್ ಪ್ರಶಸ್ತಿ ವಿಜೇತ ಸಂಗೀತಗಾರ ಎ.ಆರ್. ರೆಹಮಾನ್ ಅವರ ಕೋಮುವಾದ ಕುರಿತ ಹೇಳಿಕೆಗೆ ಸಂಬಂಧಿಸಿದಂತೆ ನಟಿ ಹಾಗೂ ಬಿಜೆಪಿ ಸಂಸದೆ ಕಂಗನಾ ರಣಾವತ್ ಮಾಡಿದ ಟೀಕೆಗೆ ನಟನಿರ್ದೇಶಕ ಪ್ರಕಾಶ್ ರಾಜ್ ತೀವ್ರ ಪ್ರತಿಕ್ರಿಯೆ ನೀಡಿದ್ದಾರೆ. ಕೇರಳ ಸಾಹಿತ್ಯ ಉತ್ಸವದಲ್ಲಿ ಮಾತನಾಡಿದ ಪ್ರಕಾಶ್ ರಾಜ್, ಈ ದೇಶದಲ್ಲಿ ಭಿನ್ನಾಭಿಪ್ರಾಯವನ್ನು ಅಪರಾಧವಾಗಿಸಲಾಗುತ್ತಿದೆ ಎಂದು ಹೇಳುತ್ತಾ, ರೆಹಮಾನ್ ತಮ್ಮ ಕೆಲಸದ ಅನುಭವಗಳ ಬಗ್ಗೆ ಮಾತನಾಡಿದ ತಕ್ಷಣವೇ ವಿರೋಧ ಹಾಗೂ ಟೀಕೆಗಳು ಆರಂಭವಾದವು ಎಂದು ಹೇಳಿದರು. ಮಾ ತುಜೆ ಸಲಾಂ ಹಾಗೂ ಜೈ ಹೋ ಹಾಡುಗಳಿಗೆ ಆಸ್ಕರ್ ಬಂದಾಗ ಸಂಭ್ರಮಿಸಿದ ಜನರು, ಇಂದು ಅವರು ಸಾಮಾನ್ಯವಾಗಿ ಮಾತನಾಡಿದ್ದಕ್ಕೆ ''ಬೊಗಳಲು'' ಶುರು ಮಾಡಿದ್ದಾರೆ ಎಂದು ಕಿಡಿಕಾರಿದರು. ತಮ್ಮ ಸಿನಿಮಾದಲ್ಲಿ ಭಾಗವಹಿಸಲು ರೆಹಮಾನ್ ನಿರಾಕರಿಸಿದ್ದ ಕಾರಣಕ್ಕೆ ಕಂಗನಾ ಅವರ ಮೇಲೆ ಆರೋಪ ಮಾಡುತ್ತಿದ್ದಾರೆ ಎಂದು ಟೀಕಿಸಿದ ಅವರು, ಸಮಾಜದ ಈ ದ್ವಂದ್ವ ನಿಲುವಿನ ಬಗ್ಗೆ ಪ್ರಶ್ನೆ ಎತ್ತಿದರು. ☯







# 'ರಕ್ಕಸಪುರದೊಳ್'ಗೆ ಸಲ್ಮಾನ್ ಖಾನ್ ಮೆಚ್ಚುಗೆ

ನಟ ರಾಜ್ ಬಿ. ಶೆಟ್ಟಿ ಅಭಿನಯದ 'ರಕ್ಕಸಪುರದೊಳ್' ಚಿತ್ರದ ಟ್ರೇಲರ್ ನೋಡಿ ಬಾಲಿವುಡ್ ಸೂಪರ್‌ಸ್ಟಾರ್ ಸಲ್ಮಾನ್ ಖಾನ್ ಮೆಚ್ಚುಗೆ ವ್ಯಕ್ತಪಡಿಸಿದ್ದು, ಚಿತ್ರದ ಹಿಂದಿ ಆವೃತ್ತಿಯನ್ನು ಬಿಡುಗಡೆ ಮಾಡುವ ಆಸಕ್ತಿ ತೋರಿದ್ದಾರೆ ಎನ್ನಲಾಗಿದೆ. ಫೆಬ್ರವರಿ 6ರಂದು ರಾಜ್ಯಾದ್ಯಂತ ಬಿಡುಗಡೆಯಾದ ಈ ಚಿತ್ರಕ್ಕೆ ಉತ್ತಮ ಪ್ರತಿಕ್ರಿಯೆ ಲಭಿಸುತ್ತಿದ್ದು, ಎರಡು ವಾರ ಕಳೆದರೂ ಕರ್ನಾಟಕಾದ್ಯಂತ ಉತ್ತಮ ಪ್ರದರ್ಶನ ಕಾಣುತ್ತಿದೆ. ಟ್ರೇಲರ್‌ನ ಟೋನ್, ನಿರ್ಮಾಣ ಮೌಲ್ಯ ಹಾಗೂ ಸಾಹಸ ದೃಶ್ಯಗಳಿಂದ ಪ್ರಭಾವಿತರಾದ ಸಲ್ಮಾನ್ ಖಾನ್, ಹಿಂದಿ ಆವೃತ್ತಿಯನ್ನು ಯಾವಾಗ ವೀಕ್ಷಿಸಬಹುದು ಎಂದು ನಿರ್ಮಾಪಕರನ್ನು ಪ್ರಶ್ನಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಪ್ಯಾನ್-ಇಂಡಿಯನ್ ತಾರೆಯೊಬ್ಬರಿಂದ ಬಂದ ಈ ಮೆಚ್ಚುಗೆ ಚಿತ್ರದ ಮೇಲಿನ ಕುತೂಹಲವನ್ನು ಮತ್ತಷ್ಟು ಹೆಚ್ಚಿಸಿದೆ. ☯



# ವಿವಾದಾತ್ಮಕ ಹೇಳಿಕೆಗೆ ತ್ರಿಶಾ ಕಿಡಿ!



ತಮಿಳುನಾಡು ಬಿಜೆಪಿ ರಾಜ್ಯಾಧ್ಯಕ್ಷ ನೈನಾರ್ ನಾಗೇಂದ್ರನ್ ಅವರ ಹೇಳಿಕೆಗಳು ವಿವಾದಕ್ಕೆ ಕಾರಣವಾಗಿದ್ದು, ನಟಿ ತ್ರಿಶಾ ಕೃಷ್ಣನ್ ಕಠಿಣವಾಗಿ ಪ್ರತಿಕ್ರಿಯಿಸಿದ್ದಾರೆ. ನಟ ವಿಜಯ್ ಅವರೊಂದಿಗೆ ಸಂಬಂಧ ಕಲ್ಪಿಸಿ ಮಾಡಿದ ಹೇಳಿಕೆಗಳನ್ನು 'ಅಸಹ್ಯ ಹಾಗೂ ಅನುಚಿತ' ಎಂದು ಖಂಡಿಸಿರುವ ತ್ರಿಶಾ, ವಕೀಲರ ಮೂಲಕ ಸಾಮಾಜಿಕ ಮಾಧ್ಯಮದಲ್ಲಿ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಫೆಬ್ರವರಿ 15ರ ಹೇಳಿಕೆಯಲ್ಲಿ, ತಾವು ಸಂಪೂರ್ಣವಾಗಿ ರಾಜಕೀಯವಾಗಿ ತಟಸ್ಥರಾಗಿದ್ದು ಯಾವುದೇ ಪಕ್ಷದೊಂದಿಗೆ ಸಂಬಂಧ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಉನ್ನತ ಸ್ಥಾನದಲ್ಲಿರುವ ವ್ಯಕ್ತಿಯಿಂದ ಇಂತಹ ಮಾತುಗಳನ್ನು ನಿರೀಕ್ಷಿಸಿರಲಿಲ್ಲ ಎಂದಿರುವ ಅವರು, ತಮ್ಮನ್ನು ರಾಜಕೀಯ ವದಂತಿಗಳೊಂದಿಗೆ ಜೋಡಿಸದೇ, ಚಿತ್ರಗಳಲ್ಲಿ ಮಾಡಿದ ಕೆಲಸದ ಆಧಾರದಲ್ಲಿ ಮಾತ್ರ ಮೌಲ್ಯಮಾಪನ ಮಾಡಬೇಕೆಂದು ಮನವಿ ಮಾಡಿದ್ದಾರೆ. ☯



# ಸಹಜ ಸ್ಥಿತಿಗೆ ಮರಳಿದ ನಟಿ ರೇಖಾ

ಒಂದು ಕಾಲದಲ್ಲಿ ಸ್ಯಾಂಡಲ್‌ವುಡ್‌ನಲ್ಲಿ ಮಿಂಚಿದ ರೇಖಾ, ಆರೋಗ್ಯ ಸಮಸ್ಯೆಯಿಂದ ಕೆಲ ವರ್ಷಗಳ ಕಾಲ ಚಿತ್ರರಂಗದಿಂದ ದೂರವಾಗಿದ್ದರು. ಇತ್ತೀಚೆಗೆ ಅವರು ಸಂಪೂರ್ಣವಾಗಿ ಗುಣಮುಖರಾಗಿದ್ದು, ಅನುಬಂಧ ಅವಾರ್ಡ್ಸ್ ಕಾರ್ಯಕ್ರಮದಲ್ಲಿ ಕಾಣಿಸಿಕೊಂಡಿದ್ದಾರೆ. ಅವರನ್ನು ನೋಡಿ ಅಭಿಮಾನಿಗಳು ಸಂತಸ ವ್ಯಕ್ತಪಡಿಸಿದ್ದಾರೆ. ಮತ್ತೆ ಕನ್ನಡ ಸಿನಿಮಾಗಳಲ್ಲಿ ನಟಿಸುವ ಆಸೆಯನ್ನೂ ರೇಖಾ ವ್ಯಕ್ತಪಡಿಸಿದ್ದಾರೆ. ಸೋಶಿಯಲ್ ಮೀಡಿಯಾದಲ್ಲೂ ಸಕ್ರಿಯರಾಗಿರುವ ಅವರು ಶೀಘ್ರದಲ್ಲೇ ಕಮ್‌ಬ್ಯಾಕ್ ಮಾಡಬಹುದು ಎನ್ನುವ ನಿರೀಕ್ಷೆ ಮೂಡಿದೆ. ☯

Vol. 41 No. 37 Edited, Printed, Published & Owned by M. RAHUL, Printed by him at Shri Omkar Printers, # 4/1, Mahimappa Industrial Estate, Near PIA Bhavan, 100ft Road, Jalahalli Cross, Chokkasandra, T. Dasarahalli Post, BANGALORE-560 057. ☎ 080-23588510, 9513892666 policenewsreporter@gmail.com
http//policenews.news https://www.facebook.com/profile.php?id=61579674874846 https://www.instagram.com/police_news?igsh=MWJ6bHJwZDRmZDc1aQ==